## ದಿನಾಂಕ:01-02-2011 ರಂದು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಸಭೆಯಲ್ಲಿ ತೀರ್ಮಾನವಾದ ವಿಷಯ

### ವಿಷಯದ ಸಂಖ್ಯೆ: 2 (158)/2010-11

ಟಿಪ್ಪಣಿಯಲ್ಲಿ ವಿವರಿಸಿರುವಂತೆ, Providing chainlink fencing mesh fencing to Devasandra kere, Chikkabasavanapura kere, Garudachar palya kere-1, Saradaramangala kere, Hoodikere ರ ಕಾಮಗಾರಿಗೆ ಕಾರ್ಯಪಾಲಕ ಅಭಿಯಂತರರು (ಯೋಜನೆ-2) ರವರು ಮೊದಲನೇ ಕೆರೆಯಲ್ಲಿ ಇ-ಪ್ರೊಕ್ಯೂರ್‌ಮೆಂಟ್ ಮುಖಾಂತರ ಟೆಂಡರ್ ಆಹ್ವಾನಿಸಿರುತ್ತಾರೆ. ಗುತ್ತಿಗೆದಾರರಿಂದ 04 ಟೆಂಡರ್‌ಗಳು ಸ್ವೀಕೃತವಾಗಿದ್ದು, ಕನಿಷ್ಠ ಟೆಂಡರ್‌ದಾರರಾದ ಶ್ರೀ. ಎಂ.ರಾಜೆಂದ್ರ ಗುತ್ತಿಗೆದಾರರ ಟೆಂಡರ್ ಅನ್ನು ಅನುಮೋದನೆಗಾಗಿ ಮಂಡಿಸಿರುತ್ತಾರೆ.

ರೂ.450.00 ಲಕ್ಷಗಳ ಕಾಮಗಾರಿಯ ಅಂದಾಜು ಪಟ್ಟಿಗೆ 2009-10 ನೇ ಸಾಲಿನ ದರಪಟ್ಟಿಯ ಆಧಾರದ ಮೇಲೆ ಮುಖ್ಯ ಅಭಿಯಂತರರು (ಯೋಜನೆ-2) ರವರು ಆಡಳಿತಾತ್ಮಕ ಮತ್ತು ತಾಂತ್ರಿಕ ಮಂಜೂರಾತಿ ನೀಡಿದ್ದು, ಟೆಂಡರ್ ಕರೆದಿರುತ್ತಾರೆ. ಸದರಿ ಕಾಮಗಾರಿಯ ಟೆಂಡರ್‌ಗಿಟ್ಟ ಮೊಬಲಗು ರೂ.4,47,40,786.40 ಗಳಾಗಿದ್ದು, ಮಂಜೂರಾದ ದರಗಳಿಗೆ ಗುತ್ತಿಗೆದಾರರಾದ ಶ್ರೀ. ಎಂ.ರಾಜೆಂದ್ರ ರವರು ಶೇಕಡ 7.27 ರಷ್ಟು ಕಡಿಮೆ ದರಗಳನ್ನು ನಮೂದಿಸಿದ್ದು, ಕನಿಷ್ಟ ಟೆಂಡರ್‌ದಾರರಾಗಿರುತ್ತಾರೆ. ಸದರಿ ಟೆಂಡರ್ ಅನ್ನು ಅನುಮೋದಿಸಲು ಮುಖ್ಯ ಅಭಿಯಂತರರು (ಯೋಜನೆ-2) ರವರು ಅನುಮೋದನೆ ಶಿಫಾರಸ್ಸು ಮಾಡಿರುತ್ತಾರೆ.

ಮೇಲಿನ ಅಂಶಗಳನ್ನು ಪರಿಶೀಲಿಸಲಾಗಿ ಟೆಂಡರ್‌ನ ಒಟ್ಟು ಮೊತ್ತವು (ಟೆಂಡರ್ ಪ್ರೀಮಿಯಂ ಸೇರಿ) ರೂ.4,14,89,110.68 ಗಳಾಗಿದ್ದು, ಸರ್ಕಾರದ ಆದೇಶ ಸಂಖ್ಯೆ:ಯು.ಟಿ.ಟಿ/335/ಎಮ್‌ಎನ್‌ಯು/ 2007(ಭಾ) ದಿನಾಂಕ:11-05-2009 ರೀತ್ಯಾ ಕರ್ನಾಟಕ ಮುನಿಸಿಪಲ್ ಕಾರ್ಪೋರೇಷನ್ ಕಾಯ್ದೆ ನಿಯಮಗಳು 1977 ನಿಯಮ 6ಕ್ಕೆ ಆರ್ಥಿಕ ಅಧಿಕಾರಗಳ ತಿದ್ದುಪಡಿಯನ್ನು ಬಾಕಿ ಇಟ್ಟು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಹೆಚ್ಚಿನ ಆರ್ಥಿಕ ಅಧಿಕಾರದ ಪ್ರತ್ಯಾಯೋಜನೆಯ ಶಿಫಾರಸ್ಸನ್ನು ಸರ್ಕಾರವು ಅಂಗೀಕರಿಸಿದ್ದು, ಇದರಂತೆ, ಟೆಂಡರ್ ಅಂಗೀಕರಿಸುವ ಪ್ರಾಧಿಕಾರ ಮಾನ್ಯ ಆಯುಕ್ತರು/ಆಡಳಿತಗಾರರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ವ್ಯಾಪ್ತಿಯಲ್ಲಿರುತ್ತದೆ.

ಈ ಹಿನ್ನಲೆಯಲ್ಲಿ, ಸದರಿ ಕಾಮಗಾರಿಯ ಟೆಂಡರ್ ಗುತ್ತಿಗೆದಾರರಾದ ಶ್ರೀ. ಎಂ.ರಾಜೇಂದ್ರ ರವರು 2009-10 ನೇ ಸಾಲಿನ ದರಪಟ್ಟಿಯ ಮೇಲೆ ನಮೂದಿಸಿದ ದರಗಳಾದ ಶೇಕಡ 7.27% ರಷ್ಟು ಕಡಿಮೆ ದರಗಳು ಅಥವಾ ರೂ.4,14,89,110.68 (ನಾಲ್ಕು ಕೋಟಿ ಹದಿನಾಲ್ಕು ಲಕ್ಷದ ಎಂಭತ್ತೊಂಭತ್ತು ಸಾವಿರದ ಒಂದು ನೂರ ಹತ್ತು ಮತ್ತು ಅರವತ್ತೆಂಟು ಪೈಸೆಗಳು ಮಾತ್ರ) ಗಳ ಟೆಂಡರ್‌ಗೆ ಅನುಮೋದನೆ ಕೋರಿ ಮಾನ್ಯ ಆಡಳಿತಗಾರರ ಮುಂದೆ ಟಿಪ್ಪಣಿಯೊಂದಿಗೆ ಪ್ರಸ್ತಾವನೆ ಸಲ್ಲಿಸಲಾಗಿದ್ದು, ಈ ಸಂಬಂಧ ಸದರಿ ಪ್ರಸ್ತಾವನೆಗೆ ಮಾನ್ಯ ಆಡಳಿತಗಾರರು ವಿಷಯದ ಸಂಖ್ಯೆ:608/09-10, ದಿನಾಂಕ:18-03-2010 ರಂದು ಅನುಮೋದನೆ ನೀಡಿರುತ್ತಾರೆ.

ಮುಂದುವರೆದಂತೆ, ದಿನಾಂಕ:28-10-10 ರಂದು ಕೆ.ಎಂ.ಸಿ.ಕಾಯ್ದೆ 1976 ರೂಲ್ 51 ರ ಅನ್ವಯ ಸದರಿ ಕಡತವನ್ನು ಮಹಾನಗರ ಪಾಲಿಕೆ ಸಭೆಯ ಪುನರ್ ಪರಿಶೀಲನೆಗಾಗಿ ಮಂಡಿಸುವಂತೆ ಶ್ರೀ ಎಂ.ನಾಗರಾಜ್, ಮಾನ್ಯ ವಿರೋಧ ಪಕ್ಷದ ನಾಯಕರು ಕೋರಿರುವ ಹಿನ್ನಲೆಯಲ್ಲಿ ಕರ್ನಾಟಕ ಮುನಿಸಿಪಲ್ ಕಾರ್ಪೋರೇಷನ್ ಕಾಯ್ದೆ 1976 ರ ರೂಲ್-51 ರ ಅಡಿಯಲ್ಲಿ ಕಡತವನ್ನು ಪುನರ್ ಪರಿಶೀಲನೆಗಾಗಿ ಮಹಾನಗರ ಪಾಲಿಕೆ ಸಭೆಯ ಮುಂದೆ ಮಂಡಿಸಿರುವ ಆಯುಕ್ತರವರ ದಿನಾಂಕ:15-12-2010 ರ ಟಿಪ್ಪಣಿ.

..........................2

ಶ್ರೀ.ಬಿ.ಎಸ್.ಸತ್ಯನಾರಾಯಣ, ಆಡಳಿತ ಪಕ್ಷದ ನಾಯಕರು ಈ ವಿಷಯವನ್ನು ಕೈ ಬಿಡಲು ಸೂಚಿಸಿದರು.

ಶ್ರೀ.ಗಂಗಭೈರಯ್ಯ ರವರು ಶ್ರೀ.ಬಿ.ಎಸ್.ಸತ್ಯನಾರಾಯಣ ರವರು ಮಂಡಿಸಿದ ಸೂಚನೆಯನ್ನು ಅನುಮೋದಿಸಿದರು.

ದೀರ್ಘವಾದ ಚರ್ಚೆಯ ನಂತರ ಪ್ರಸ್ತಾವನೆಯನ್ನು ಕೈ ಬಿಡಲು ಸಭೆಯು ಸೂಚಿಸಿತು.

ಮಹಾಪೌರರು ಮೇಲ್ಕಂಡ ಸೂಚನೆಯನ್ನು ಮತಕ್ಕೆ ಹಾಕಲಾಗಿ ಸೂಚನೆಯು ಸರ್ವಾನುಮತದಿಂದ ಅಂಗೀಕೃತವಾಯಿತು.

**<u>ನಿರ್ಣಯ:</u>** "ಪ್ರಸ್ತಾವನೆಯನ್ನು ಕೈ ಬಿಡಲಾಗಿದೆ."

ಎಸ್.ಕೆ.ನಟರಾಜ

(ಎಸ್.ಕೆ.ನಟರಾಜ)
ಮಹಾಪೌರರು